ಓ.ಎಸ್ಃ 10/2015

ಪಿ. ಡಬ್ಲ್ಯೂ ಃ 01

**<u>ಸಾಕ್ಷಿಗೆ ದಿನಾಂಕ 05.04.2021 ರಂದು ಪ್ರಮಾಣ ವಚನ ನೀಡಲಾಯಿತು.</u>**

**<u>ಪಾಟೀಸವಾಲುಃ ಪ್ರತಿವಾದಿ ಪರ ಶ್ರೀ ಸಿ ಆರ್ ಎಸ್ ವಕೀಲರಿಂದ</u>**

ನನ್ನ ತಾಯಿ ಹೃದಾಯಾಘಾತದಿಂದ ತೀರಿಕೊಂಡಿದ್ದಾರೆ. ನನ್ನ ತಂದೆ ದಾವಾ ಷೆಡ್ಯೂಲ್ ಸ್ವತ್ತಿನ್ನು ನ್ಯಾಯಾಲಯದಿಂದ ಸ್ವಾಧೀನಕ್ಕೆ ತೆಗೆದುಕೊಂಡಿದ್ದರು ಎಂದು ತೋರಿಸಲು ನಿಪಿ 2 ನ್ನು ಹೊರತುಪಡಿಸಿ ಬೇರೆ ಯಾವುದೇ ದಾಖಲೆಗಳು ಇಲ್ಲ. ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಖಾತೆ ಬದಲಾವಣೆ ಮಾಡಿಕೊಳ್ಳಲು ನನ್ನ ತಂದೆ ಅರ್ಜಿ ಸಲ್ಲಿಸಿದ್ದರೋ ಇಲ್ಲವೋ ನನಗೆ ಗೊತ್ತಿಲ್ಲ. ನನ್ನ ತಾಯಿ ಹೆಸರಿನಲ್ಲಿ ಖಾತೆ ಬದಲಾವಣೆಯಾಗುವ ಪೂರ್ವದಲ್ಲಿ ದಾವಾ ಷೆಡ್ಯೂಲ್ ಸ್ವತ್ತು 1 ನೇ ಪ್ರತಿವಾದಿಯ ಹೆಸರಿನಲ್ಲಿತ್ತು ಎಂದರೆ ಸರಿ . ನನಗೂ 1 ನೇ ಪ್ರತಿವಾದಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ . 1 ನೇ ಪ್ರತಿವಾದಿ ನನ್ನ ತಾಯಿಯ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಳ್ಳಲು ಯಾವುದೇ ಪತ್ರವನ್ನು ಬರೆದುಕೊಟ್ಟಿಲ್ಲ. ನನ್ನ ತಾಯಿಯ ಹೆಸರಿಗೆ ಖಾತೆ ಬದಲಾವಣೆಯಾದಾಗ 1 ನೇ ಪ್ರತಿವಾದಿ ಬದುಕಿದ್ದರು. ನಿಪಿ 2 ರ ಪ್ರಕಾರ ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ನನ್ನ ತಾಯಿಯ ಹೆಸರಿಗೆ ಖಾತೆ ಬದಲಾವಣೆಯಾಗಿದೆ. ನಾವು ಚಾಮಲಾಪುರ ಗ್ರಾಮ ಬನ್ನೂರು ಹೋಬಳಿ ಯಲ್ಲಿ ವಾಸವಿದ್ದೇವೆ ಎಂದರೆ ಸರಿ . ದಾವಾ ಷೆಡ್ಯೂಲ್ ಸ್ವತ್ತು ಗೆಂಡೆ ಹೊಸಹಳ್ಳಿ ಗ್ರಾಮದಲ್ಲಿದೆ ಎಂದರೆ ಸರಿ .

ಮೃತ 1 ನೇ ಪ್ರತಿವಾದಿಯ ಹೆಸರಿನಲ್ಲಿ ಖಾತೆ ಇದ್ದ ಬಗ್ಗೆ ಪ್ರಶ್ನಿಸಿ ತಹಶಿಲ್ದಾರ್ ಹಾಗೂ ಎ ಸಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದೇನೆ. ಸದರಿ ಅರ್ಜಿಯ ನಕಲನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೊ ಇಲ್ಲವೋ ನನಗೆ ಗೊತ್ತಿಲ್ಲ. ನ್ಯಾಯಾಲಯದ ಆದೇಶದಂತೆ ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಸ್ವಾಧೀನ ಬಿಟ್ಟುಕೊಟ್ಟ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ. ನನ್ನ ತಾಯಿಯ ಹೆಸರಿನಲ್ಲಿ ಖಾತೆ ಬದಲಾವಣೆ ಮಾಡಿಕೊಳ್ಳುವಾಗ ಮೃತ 1 ನೇ ಪ್ರತಿವಾದಿಗೆ ನೋಟಿಸನ್ನು ನೀಡಿದ್ದರೋ ಇಲ್ಲವೋ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿ ತೀರಿಕೊಂಡ ನಂತರ ಈಗಲೂ 2 ರಿಂದ 4 ನೇ ಪ್ರತಿವಾದಿಗಳು ದಾವಾ ಷೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ನನ್ನ ತಂದೆ ನ್ಯಾಯಾಲಯದ ಹರಾಜು ಪ್ರಕ್ರಿಯೆಯಲ್ಲಿ ದಾವಾ ಷೆಡ್ಯೂಲ್ ಸ್ವತ್ತನ್ನು ಪಡೆದುಕೊಂಡ ನಂತರ ಸ್ವಾಧೀನ ಪಡೆದುಕೊಳ್ಳಲು ಅರ್ಜಿಯನ್ನು ಸಲ್ಲಿಸಿದ್ದರಾ ಎಂದರೆ ಸಾಕ್ಷಿಯು ಅದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಷೆಡ್ಯೂಲ್ ಸ್ವತ್ತಿನ ಸ್ವಾಧೀನವನ್ನು 1 ನೇ ಪ್ರತಿವಾದಿ ಹಾಗೂ ಆಕೆಯ ಗಂಡ ನಮಗೆ ಬಿಟ್ಟುಕೊಟ್ಟಿರುತ್ತಾರೆ. ಆ ರೀತಿ ಸ್ವಾಧೀನ ಬಿಟ್ಟುಕೊಟ್ಟ ಬಗ್ಗೆ ನಮ್ಮ ಬಳಿ ಯಾವುದೇ ದಾಖಲೆಗಳು ಇಲ್ಲ. ನಾವು ಕಾನೂನು ಬದ್ದವಾಗಿ ದಾವಾ ಷೆಡ್ಯೂಲ್ ಸ್ವತ್ತಿನ ಸ್ವಾಧೀನತೆಯನ್ನು ಪಡೆದುಕೊಳ್ಳಲಿಲ್ಲ ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ಪ್ರತಿವಾದಿಗಳು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ನಾವು ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇಲ್ಲದೇ ಇರುವುದರಿಂದ ಪ್ರತಿವಾದಿಗಳು ನಮ್ಮ ಸ್ವಾಧೀನಕ್ಕೆ ತೊಂದರೆ ನೀಡುವ ಪ್ರಶ್ನೆ ಉದ್ಭವವಾಗುವುದಿಲ್ಲ ಎಂದರೆ

ಸರಿಯಲ್ಲ. ನಾನು ಅಕ್ರಮವಾಗಿ ಖಾತೆಯನ್ನು ಬದಲಾವಣೆ ಮಾಡಿಕೊಂಡು ಪ್ರತಿವಾದಿಗಳ ವಿರುದ್ದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ
ಶ್ರೀರಂಗಪಟ್ಟಣ